ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಲ್ಲಿ ಮೀಸಲಾತಿ ಸಂಖ್ಯೆ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

288 (339) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2015 ನೇ ಸಾಲಿನ 428 ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಲ್ಲಿ ವಿವಿಧ ವರ್ಗಗಳಿಗೆ ನಿಗದಿಪಡಿಸಿದ ಮೀಸಲಾತಿ ಸಂಖ್ಯೆ ಎಷ್ಟು ; (Vertical Reservation)

(ಆ) ಈ ಪೈಕಿ ಮೀಸಲಾತಿ ಕ್ಲೈಮ್ ಮಾಡಿ ಮೆರಿಟ್ ಆಧಾರದ ಮೇಲೆ ಸಾಮಾನ್ಯ ವರ್ಗದಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗ-1, 2ಎ , 2ಬಿ, 3ಎ, 3ಬಿ ಮತ್ತು ಸಾಮಾನ್ಯ ವರ್ಗದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; (ವರ್ಗಾವಾರು ಸಂಖ್ಯೆಯ (Vertical Reservation) ಮಾಹಿತಿ ಒದಗಿಸುವುದು)

(ಇ) ಮೆರಿಟ್ ಆಧಾರದ ಮೇಲೆ ಸಾಮಾನ್ಯ ವರ್ಗದ ಹುದ್ದೆಗಳಿಗೆ ಆಯ್ಕೆಯಾದ ಪ್ರತಿ ಮೀಸಲಾತಿ ವರ್ಗದ ಅಭ್ಯರ್ಥಿಗಳ ವರ್ಗಾವಾರು ಸಂಖ್ಯೆ ತಿಳಿಸುವುದು; ಎಸ್. ಸಿ/ಎಸ್. ಟಿ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಸಾಮಾನ್ಯ ವರ್ಗ (Vertical Reservation) ಅಭ್ಯರ್ಥಿಗಳ ಸಂಖ್ಯೆ ಎಷ್ಟು?